# ವಾರ್ಡ್ ಸಮಿತಿಯ ನಡವಳಿಗಳು

******

ದಿನಾಂಕ: 16/01/2021

ಸಭೆಯಲ್ಲಿ ಹಾಜರಿದ್ದ ಸದಸ್ಯರುಗಳು ಹಾಗೂ ಅಧಿಕಾರಿಗಳು

ಶ್ರೀ. ಎಂ.ಲಿಯಾಕತ್, ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು,

ಶ್ರೀ. ವಿನಯ್. ಕೆ, ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ.53, ಬಸವನಪುರ ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿಗಳು,

ಶ್ರೀ. ರಾಘವೇಂದ್ರ. ಜೆ.ಎನ್, ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ.53, ಬಸವನಪುರ,

ಶ್ರೀ. ಸುರೇಶ್. ಎಸ್, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ.53, ಬಸವನಪುರ,

ಶ್ರೀ. ಓಬಲೇಶ್.ವಿ, ತೆರಿಗೆ ನಿರೀಕ್ಷಕರು, ವಾರ್ಡ್ ಸಂಖ್ಯೆ.53, ಬಸವನಪುರ,

ಶ್ರೀ. ದಿನೇಶ್, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ,

ಮತ್ತು ವಾರ್ಡ್‌ನ ಸಾರ್ವಜನಿಕರು.

ದಿನಾಂಕ **16/01/2021** ರಂದು ಕೆ.ಆರ್.ಪುರ ವಿಧಾನಸಭಾ

- ದೊಡ್ಡಬಸವನಪುರ ಮುಖ್ಯ ರಸ್ತೆಯಲ್ಲಿ ಅನಧೀಕೃತವಾಗಿ ಕತ್ತರಿಸಿರುವ ರಸ್ತೆಯನ್ನು ದುರಸ್ತಿಪಡಿಸಲು ಬಿ.ಡ್ಬ್ಲ್ಯೂಎಸ್.ಎಸ್.ಬಿ ಅಭಿಯಂತರರರಿಗೆ ಕ್ರಮ ಕೈಗೊಳ್ಳುವಂತೆ ತಿಳಿಸಲಾಯಿತು.
- ವಾರ್ಡ್‌ನಲ್ಲಿ ಬಿ.ಡ್ಬ್ಲ್ಯೂಎಸ್.ಎಸ್.ಬಿ ವತಿಯಿಂದ ಯಾವುದೇ ರಸ್ತೆಯನ್ನು ಕತ್ತರಿಸುವ ಮೊದಲು ಪಾಲಿಕೆಯಿಂದ ಅನುಮತಿಯನ್ನು ಪಡೆಯುವಂತೆ ಪದೇಪದೇ ತಿಳಿಸಿದರೂ ಸಹ ಯಾವುದೇ ಕ್ರಮ ಕೈಗೊಳ್ಳದ ಬಿ.ಡ್ಬ್ಲ್ಯೂಎಸ್.ಎಸ್.ಬಿ ಅಭಿಯಂತರರರಿಗೆ ಮುಂದಿನ ದಿನಗಳಲ್ಲಿ ಶಿಸ್ತು ಕ್ರಮ ಕೈಗೊಳ್ಳುವ ಬಗ್ಗೆ ಎಚ್ಚರಿಸಲಾಯಿತು.
- ಗಾಯತ್ರಿ ಬಡಾವಣೆ ಹಾಗೂ ಆರ್.ಟಿ.ಓ ಕಛೇರಿ ಹಿಂಭಾಗದ ಬಡಾವಣೆಗಳಲ್ಲಿ ಹಾದು ಹೋಗುವ ಮಳೆ ನೀರು ಕಾಲುವೆಯ ಹೂಳನ್ನು ತೆಗೆಯಲು ಶ್ರೀ.ರಘು.ವಿ, ಸ.ಕಾ.ಅ, ಮಳೆನೀರು ಕಾಲುವೆ ಉವಿ, ಕೆ.ಆರ್.ಪುರ ರವರಿಗೆ ತಿಳಿಸಲಾಯಿತು.
- ಕಸ ವಿಲೇವಾರಿಯ ಬಗ್ಗೆ ಚರ್ಚಿಸಲಾಗಿ, ವಾರ್ಡ್‌ನಲ್ಲಿ ಉತ್ಪತ್ತಿಯಾಗುವ ಘನತ್ಯಾಜ್ಯದ ಬಗ್ಗೆ ಚರ್ಚಿಸಲಾಗಿ ಕಸ ವಿಂಗಡಣೆ ಮತ್ತು ವಿಲೇವಾರಿ ಕಾರ್ಯವು ಸಮರ್ಪಕವಾಗಿ ನಡೆಸಬೇಕೆಂದು ಸಭೆಯಲ್ಲಿ ತೀರ್ಮಾನಿಸಲಾಯಿತು. ಅಂದಿನ ಕಸವನ್ನು ಅಂದೇ ವಿಲೇವಾರಿ ಮಾಡಬೇಕೆಂದು ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲಾಯಿತು. ಆಗಿಂದಾಗ್ಗೆ ಸೊಳ್ಳೆ ನಿಯಂತ್ರಿಸಲು ಕ್ರಮ ಕೈಗೊಳ್ಳಲು ತೀರ್ಮಾನಿಸಲಾಯಿತು.

ಹೊಸ ಕಾಮಗಾರಿಗಳನ್ನು ಕೈಗೊಳ್ಳುವ ವರೆಗೆ ತಾತ್ಕಾಲಿಕವಾಗಿ ವಾರ್ಡ್ ಇಂಜಿನಿಯರ್‌ರವರಿಗೆ ರಸ್ತೆಗಳಲ್ಲಿನ ಗುಂಡಿಗಳ ಬಗ್ಗೆ ಗಮನ ಹರಿಸಿ ತುರ್ತಾಗಿ ಕ್ರಮವಹಿಸಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ನಿಗಾವಹಿಸಲು ತಿಳಿಸಲಾಯಿತು.

ಸದಸ್ಯರು ಆಗಿಂದಾಗೆ ಕಾಮಗಾರಿಗಳನ್ನು ಪರಿವೀಕ್ಷಿಸಿ ಉತ್ತಮ ಸಲಹೆಗಳನ್ನು ಹಾಗೂ ಅತ್ಯವಶ್ಯಕವಾಗಿರುವ ಕಾಮಗಾರಿಗಳನ್ನು ಗುರುತಿಸಿ ಮುಂದಿನ ಸಭೆಯಲ್ಲಿ ತಿಳಿಸಲು ಕೋರಲಾಯಿತು.

ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಮಾನ್ಯ ಅಧ್ಯಕ್ಷರು ವಾರ್ಡ್ ಸಮಿತಿ
ಮತ್ತು ನೋಡಲ್ ಅಧಿಕಾರಿ

ವಾರ್ಡ್ ಸಮಿತಿ ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು

Scanned with CamScanner